ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

25

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE: 28/1/2021

# ಅಧಿವೇಶನ: ಇಂದಿನಿಂದ ನಿಷೇಧಾಜ್ಞೆ

ಬೆಂಗಳೂರು: ವಿಧಾನಮಂಡಲ ಅಧಿವೇಶನ ನಡೆಯುವುದರಿಂದ ಜ.28ರಿಂದ ಫೆ.5ರವರೆಗೆ ನಿಷೇಧಾಜ್ಞೆ (ಸೆಕ್ಷನ್ 144) ಜಾರಿಗೊಳಿಸಿ ಬೆಂಗಳೂರು ನಗರ ಪೊಲೀಸ್ ಕಮಿಷನರ್ ಕಮಲ್ ಪಂತ್ ಆದೇಶ ಹೊರಡಿಸಿದ್ದಾರೆ.

ಅಧಿವೇಶನ ನಡೆಯುವ ವಿಧಾನಸೌಧದ ಸುತ್ತಲೂ ಎರಡು ಕಿ.ಮೀ.ವ್ಯಾಪ್ತಿಯಲ್ಲಿ ಬೆಳಿಗ್ಗೆ 6ರಿಂದ ಮಧ್ಯರಾತ್ರಿ 12 ಗಂಟೆವರೆಗೆ ನಿಷೇಧಾಜ್ಞೆ ಇರಲಿದೆ.

‘ಈ ಅವಧಿಯಲ್ಲಿ ಐದಕ್ಕಿಂತ ಹೆಚ್ಚು ಮಂದಿ ಗುಂಪು ಸೇರುವುದು, ಮೆರವಣಿಗೆ ಮತ್ತು ಸಭೆ ಸೇರುವುದು, ಸ್ಫೋಟಕ ಸಿಡಿಸುವುದು, ಪ್ರತಿಕೃತಿ ದಹನ, ಘೋಷಣೆಗಳನ್ನು ಕೂಗುವುದು, ಶಸ್ತ್ರಾಸ್ತ್ರ ಹಾಗೂ ಮಾರಕಾಸ್ತ್ರಗಳನ್ನು ಒಯ್ಯುವುದನ್ನು ನಿಷೇಧಿಸಲಾಗಿದೆ’ ಎಂದೂ ಆದೇಶದಲ್ಲಿ ತಿಳಿಸಿದ್ದಾರೆ.